**ವಿಧಾನ ಪರಿಷತ್ತು ಮಾನ್ಯ ಸದಸ್ಯರುಗಳಾದ ಡಾ॥ ತೇಜಸ್ವಿನಿಗೌಡ, ಶ್ರೀ ಎನ್.ರವಿಕುಮಾರ್, ಶ್ರೀ ನಿರಾಣಿ ಹಣಮಂತ್ ರುದ್ರಪ್ಪ, ಶ್ರೀ ಡಿ.ಎಸ್.ಅರುಣ್, ಶ್ರೀ ಕೆ.ಎಸ್.ನವೀನ್ ಹಾಗೂ ಡಾ॥ ಸೂರಜ್ ರೇವಣ್ಣ ಇವರುಗಳು ನಿಯಮ-330 ರಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ**

ವಿಷಯ: ಕರ್ನಾಟಕ ರಾಜ್ಯಾದ್ಯಂತ ಮಹಿಳಾ-ಮಕ್ಕಳ ಸುರಕ್ಷೆ ಅಪಾಯದಲ್ಲಿದ್ದು, ಈ ಬಗ್ಗೆ ಸರ್ವಾಂಗೀಣ ಭದ್ರತೆ, ರಕ್ಷಣೆ ಬಯಸಿ ವಿಸ್ತೃತ ಚರ್ಚೆಗೆ ಅವಕಾಶ ಕೋರಿ.

ಉತ್ತರ : ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆಗಾಗಿ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳ ವಿವರಗಳು ಈ ಕೆಳಕಂಡಂತಿವೆ.

- ಮಹಿಳೆಯರ ಮತ್ತು ಮಕ್ಕಳ ರಕ್ಷಣೆಗಾಗಿ, ಮಹಿಳಾ ಸಹಾಯವಾಣಿ, ಮಕ್ಕಳ ಸಹಾಯವಾಣಿ ಕಾರ್ಯ ನಿರ್ವಹಿಸುತ್ತಿದ್ದು, ಸ್ಪಂದನ ಸಹಾಯವಾಣಿಯನ್ನು ಸಹ ಸ್ಥಾಪಿಸಿ ಕಾರ್ಯನಿರ್ವಹಿಸಲಾಗುತ್ತಿದೆ.
- ದಿನದ 24 ಗಂಟೆಯೂ ಸಹ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆಗಾಗಿ "ಪಿಂಕ್ ಹೊಯ್ಸಳ" ಮತ್ತು 112 ಗಸ್ತು ವಾಹನ ಗಸ್ತು ಕಾರ್ಯ ನಿರ್ವಹಿಸುತ್ತಿವೆ.
- ನೊಂದ ಮಹಿಳೆ ಮತ್ತು ಮಕ್ಕಳ ಸಹಾಯಕ್ಕಾಗಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ 1050 ಪೊಲೀಸ್ ಠಾಣೆಗಳಲ್ಲಿ ಹೆಲ್ಪ್ ಡೆಸ್ಕ್‌ಗಳನ್ನು ಸ್ಥಾಪಿಸಲಾಗಿದೆ.
- ರಾಜ್ಯದ ಇತರೆ ಜಿಲ್ಲೆಗಳಾದ ಬಾಗಲಕೋಟೆ ಜಿಲ್ಲೆಯಲ್ಲಿ ಚನ್ನಮ್ಮ ಪಡೆ, ಬಳ್ಳಾರಿ ಜಿಲ್ಲೆಯಲ್ಲಿ ಓಬವ್ವ ಪಡೆ, ದಾವಣಗೆರೆ ಜಿಲ್ಲೆಯಲ್ಲಿ ದುರ್ಗಾ ಪಡೆ, ಗದಗ ಜಿಲ್ಲೆಯಲ್ಲಿ ಚನ್ನಮ್ಮ ಪಡೆ, ಉತ್ತರ ಕನ್ನಡ ಜಿಲ್ಲೆಯಲ್ಲಿ ಶರಾವತಿ ಓಬ್ಬವ್ವ ಪಡೆ, ಬೀದರ್ ಜಿಲ್ಲೆಯಲ್ಲಿ ರಾಣಿ ಚನ್ನಮ್ಮ ವಾಹನವು ಹೆಚ್ಚಾಗಿ ಮಹಿಳೆಯರು ಓಡಾಡುವ ಜನನಿಬಿಡ ಸ್ಥಳಗಳಲ್ಲಿ ಹಾಗೂ ಶಾಲಾ ಕಾಲೇಜುಗಳ ಬಳಿ ಹೆಚ್ಚಿನ ಗಸ್ತು ಕಾರ್ಯವನ್ನು ನಿರ್ವಹಿಸುತ್ತಿರುತ್ತವೆ.
- ತೆರೆದ ಮನೆ ಯೋಜನೆಯ ಮೂಲಕ ಮಕ್ಕಳಿಗಾಗಿ ಹಾಗೂ ಜನ ಸಂಪರ್ಕ ಸಭೆಯ ಮೂಲಕ ಮಹಿಳೆಯರಿಗೆ ಸ್ವಯಂ ರಕ್ಷಣೆಯ ಬಗ್ಗೆ ಕರಾಟೆ ಮತ್ತು ಕೆಲವು ಕೌಶಲ್ಯಗಳ ಬಗ್ಗೆ ಪ್ರಾತ್ಯಕ್ಷಿಕೆಯ ಮೂಲಕ ಜಾಗೃತಿ ಮೂಡಿಸಲಾಗುತ್ತಿರುತ್ತದೆ.
- ಅಪರಾಧಗಳನ್ನು ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ, ಪ್ರಮುಖ ಸ್ಥಳಗಳಲ್ಲಿ, ಜಂಕ್ಷನ್‌ಗಳಲ್ಲಿ ಸಿ.ಸಿ.ಟಿ.ವಿ. ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದೆ ಹಾಗೂ ಈ ಸಂಬಂಧ ಕರಪತ್ರಗಳು ಹಾಗೂ ಪೋಸ್ಟರ್‌ಗಳ ಮೂಲಕ ಮಹಿಳೆಯರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.
- ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 20 ಪಿಸಿಸಿ 2021, ದಿನಾಂಕ 29/6/2021 ರಲ್ಲಿ ಮಕ್ಕಳ ರಕ್ಷಣೆಗಾಗಿ ಜೆ.ಜೆ. ಕಾಯ್ದೆ ಅಡಿ (ಕಾನೂನು ಸಂಘರ್ಷಕ್ಕೆ ಒಳಪಟ್ಟ ಮಕ್ಕಳು) ರಾಜ್ಯದ ನಗರ ಹಾಗೂ ಜಿಲ್ಲೆಗಳಲ್ಲಿ ಜೆ.ಜೆ. ಘಟಕಗಳನ್ನು ಸ್ಥಾಪಿಸಲಾಗಿದೆ.
- ಅಪರಿಚಿತ ವ್ಯಕ್ತಿಗಳ ಬಳಿ ಸಂಪರ್ಕ ಇಟ್ಟುಕೊಳ್ಳದಂತೆ, ಆಸೆ ಆಮಿಷಗಳನ್ನು ಒಡ್ಡುವ ಆಸಾಮಿಗಳ ಬಗ್ಗೆ ಮಹಿಳೆಯರಿಗೆ & ಮಕ್ಕಳಿಗೆ ಹಾಗೂ ಗ್ರಾಮಗಳಲ್ಲಿ ಸೂಕ್ತ ತಿಳುವಳಿಕೆಗಳನ್ನು ನೀಡಲಾಗಿರುತ್ತದೆ.
- ಚಾಲ್ತಿಯಲ್ಲಿರುವ ಸಾಮಾಜಿಕ ಜಾಲತಾಣಗಳಾದ ಬ್ಲಾಗ್, ಟ್ವಿಟರ್, ಫೇಸ್ ಬುಕ್, ಪೊಲೀಸ್ ವೆಬ್ ಸೈಟ್ ಹಾಗೂ ಇತರೆ ಜಾಲತಾಣಗಳ ಮೂಲಕ ಮಾನವ ಕಳ್ಳ ಸಾಗಾಣೆ ಬಗ್ಗೆ ಜಾಗೃತಿ ಮೂಡಿಸುವ ಸಂದೇಶವನ್ನು ಪ್ರಕಟಿಸಲಾಗಿದೆ.

Scanned with CamScanner

ಬೆಂಗಳೂರು ನಗರದಲ್ಲಿ "ಸೇಫ್ ಸಿಟಿ ಫಾರ್ ಸೇಫ್ಟಿ ಆಫ್ ವುಮೆನ್" ಯೋಜನೆಯಡಿ ಮಹಿಳೆಯರ ಸುರಕ್ಷತೆಯ ಸಲುವಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.

- ನಗರದ 1640 ಸ್ಥಳಗಳಲ್ಲಿ ಒಟ್ಟು 4100 ಸಿಸಿ ಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ.
- ವಿವಿಧ ಸ್ಥಳಗಳಲ್ಲಿ ಒಟ್ಟು 30 ಸೇಫ್ಟಿ ಐಲ್ಯಾಂಡ್‌ಗಳನ್ನು ಗುರುತಿಸಲಾಗಿದೆ.
- ಒಂದು ಮೊಬೈಲ್ ಕಮಾಂಡ್ ಅಂಡ್ ಕಂಟ್ರೋಲ್ ವಾಹನ ಖರೀದಿಸಿದ್ದು, ಇದಕ್ಕೆ ಅಗತ್ಯವಿರುವ ಫ್ಯಾಬ್ರಿಕೇಷನ್ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ.
- ವಿವಿಧ ಸ್ಥಳಗಳಲ್ಲಿ 96 ವೀಕ್ಷಣಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಇವು ಕಾರ್ಯನಿರ್ವಹಣೆಯಲ್ಲಿವೆ.
- 8 ಡ್ರೋನ್ ಕ್ಯಾಮೆರಾಗಳನ್ನು ಖರೀದಿಸಿ ಬಳಸಲಾಗುತ್ತಿದೆ.

---

**ಹೆಚ್‌ಡಿ 527 ಎಸ್‌ಎಸ್‌ಟಿ 2023**

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು

Scanned with CamScanner